# All India Radio: Bangalore
# Regional Bulletin In Kannada
# 27.05.2026 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 27.05.2026 / 2.30 p.m.

**<><><><>**

ಮುಖ್ಯಾಂಶಗಳು

1. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ವಿಚಾರ ; ಎಲ್ಲದಕ್ಕೂ ನಾಳೆ ಉತ್ತರ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
2. ವರಿಷ್ಠರ ಯಾವುದೇ ನಿರ್ಧಾರಕ್ಕೆ ತಾವು ಬದ್ಧ ; ಗೃಹ ಸಚಿವ ಡಾ.ಜಿ.ಪರಮೇಶ್ವರ್
3. ಮುಖ್ಯಮಂತ್ರಿ ರಾಜೀನಾಮೆ ನೀಡಿದರೆ ರಾಜ್ಯದಲ್ಲಿ ಅವಧಿಪೂರ್ವ ಚುನಾವಣೆ ನಿಶ್ಚಿತ ; ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ
4. ಮಾಜಿ ಪ್ರಧಾನಿ ಜವಹಾರ್‌ಲಾಲ್ ನೆಹರು ಅವರ ಪುಣ್ಯ ಸ್ಮರಣೆ ; ನೆಹರು ಕೊಡುಗೆ ಸ್ಮರಿಸಿದ ಮುಖ್ಯಮಂತ್ರಿ
5. ರಾಜ್ಯದಲ್ಲಿ ಕೃತಕಬುದ್ಧಿಮತ್ತೆ ಆಧಾರಿತ ಜಲ ಆಡಳಿತಕ್ಕೆ ಸರ್ಕಾರ ಒತ್ತು ; ಮುಖ್ಯಕಾರ್ಯದರ್ಶಿ ಡಾ.ಶಾಲಿನಿ ರಜನೀಶ್

<><><><>

ದೆಹಲಿಯಲ್ಲಿ ನಡೆದ ಹೈಕಮಾಂಡ್ ಜೊತೆಗಿನ ಸಭೆಯ ಬಳಿಕ ಇದೇ ಮೊದಲ ಬಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮೌನ ಮುರಿದಿದ್ದಾರೆ. ಎಲ್ಲದಕ್ಕೂ ನಾಳೆ ಉತ್ತರ ನೀಡುವುದಾಗಿ ತಿಳಿಸಿದ್ದಾರೆ. ವಿಧಾನಸೌಧದಲ್ಲಿಂದು ಮಾಜಿ ಪ್ರಧಾನಿ ಜವಹಾರ್‌ಲಾಲ್ ನೆಹರು ಅವರ ೬೨ನೇ ಪುಣ್ಯತಿಥಿ ಅಂಗವಾಗಿ ನೆಹರು ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ನೆಹರು ದೇಶಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸಿದ್ದಾರೆ.

<><><><>

ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತಂತೆ ನಾಳೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅಧಿಕೃತವಾಗಿ ಘೋಷಿಸಲಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ

ಅವರು, ಹೈಕಮಾಂಡ್ ನಿರ್ಧಾರಕ್ಕೆ ಬದ್ಧವಾಗಿರುವುದಾಗಿ ತಿಳಿಸಿದ್ದಾರೆ. ರಾಜ್ಯಸಭೆ ಮತ್ತು ವಿಧಾನಪರಿಷತ್ ಚುನಾವಣೆಯಲ್ಲಿ ಅಭ್ಯರ್ಥಿಗಳ ಆಯ್ಕೆಗೆ ಸಂಬಂಧಿಸಿದ ಚರ್ಚೆಗಳ ಬಗ್ಗೆ ಮಾತ್ರ ಹೈಕಮಾಂಡ್ ತಿಳಿಸಿದೆ ಎಂದು ಹೇಳಿದ್ದಾರೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವ ವರದಿಗಳು ಕೇವಲ ಊಹಾಪೋಹ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೆಹಲಿಯಲ್ಲಿ ನಡೆದ ಸಭೆಯಲ್ಲಿ ನಾಯಕತ್ವ ಬದಲಾವಣೆ ಕುರಿತು ಯಾವುದೇ ಚರ್ಚೆಗಳು ನಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಪಕ್ಷದ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಈಗಾಗಲೇ ನೀಡಿರುವ ಸ್ಪಷ್ಟೀಕರಣವನ್ನು ಅಂತಿಮವೆಂದು ಪರಿಗಣಿಸಬೇಕು ಎಂದು ಹೇಳಿದ್ದಾರೆ. ದೆಹಲಿಯಲ್ಲಿ ರಾಜ್ಯಸಭೆ ಮತ್ತು ವಿಧಾನಪರಿಷತ್ ಚುನಾವಣೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಮಾತ್ರ ಚರ್ಚಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ನಾಯಕತ್ವ ಬದಲಾವಣೆಯ ವದಂತಿಗಳ ನಡುವೆ ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಅವರೊಂದಿಗೆ ಉಪಹಾರ ಕೂಟ ನಡೆಸಲಿದ್ದಾರೆ. ಬಳಿಕ ಸುದ್ದಿಗೋಷ್ಠಿ ನಡೆಸಿ ಎಲ್ಲಾ ವದಂತಿಗಳಿಗೆ ಸ್ಪಷ್ಟನೆ ನೀಡಲಿದ್ದಾರೆ. ಮುಖ್ಯಮಂತ್ರಿ ಅವರೊಂದಿಗಿನ ಉಪಹಾರ ಸಭೆಯನ್ನು ಉಪಮುಖ್ಯಮಂತ್ರಿ ಅವರ ಕಚೇರಿ ದೃಢಪಡಿಸಿದೆ ಎಂದು ಐಎಎನ್ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಪ್ರಸ್ತುತ ದೆಹಲಿಯಲ್ಲಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನಾಳೆ ಬೆಳಗ್ಗೆ ಬೆಂಗಳೂರಿಗೆ ಆಗಮಿಸಲಿದ್ದಾರೆ. ಸಭೆಯ ಬಳಿಕ ಉಭಯ ನಾಯಕರು ಪತ್ರಿಕಾಗೋಷ್ಠಿ ನಡೆಸಿ ನಾಯಕತ್ವ ಬದಲಾವಣೆ ಕುರಿತಂತೆ ಇರುವ ಊಹಾಪೋಹಗಳಿಗೆ ಸ್ಪಷ್ಟನೆ ನೀಡಲಿದ್ದಾರೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಿದರೆ ರಾಜ್ಯದಲ್ಲಿ ಅವಧಿಪೂರ್ವ ಚುನಾವಣೆ ನಿಶ್ಚಿತ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಆಂತರಿಕ ಕಚ್ಚಾಟದಿಂದ ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದಿದೆ ಎಂದು ಆರೋಪಿಸಿದ್ದಾರೆ. ರಾಜ್ಯದಲ್ಲಿ

ಕಾಂಗ್ರೆಸ್ ಅವನತಿ ಆರಂಭವಾಗಿದ್ದು, ಕರ್ನಾಟಕದಲ್ಲಿ ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಅಧಿಕಾರ ಕಳೆದುಕೊಳ್ಳಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಭ್ರಷ್ಟಾಚಾರದಲ್ಲಿ ಮುಳುಗಿರುವ ರಾಜ್ಯದ ಆಡಳಿತವನ್ನು ಬದಲಾಯಿಸಲು ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸಿದೆ ಎಂದು ದೂರಿದ್ದಾರೆ.

<><><>

ಆಧುನಿಕ ಭಾರತದ ನಿರ್ಮಾಣದಲ್ಲಿ ನೆಹರು ಅವರ ಪಾತ್ರ ಬಹು ದೊಡ್ಡದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಧಾನಸೌಧದಲ್ಲಿಂದು ಮಾಜಿ ಪ್ರಧಾನಿ ಜವಹಾರ್‌ಲಾಲ್ ನೆಹರು ಅವರ ಪುಣ್ಯ ಸ್ಮರಣೆ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ನೆಹರು ಅವರು, ದೇಶದ ಮೊದಲ ಪ್ರಧಾನಿಗಳಾಗಿ ೧೭ ವರ್ಷಗಳ ಕಾಲ ಜನರ ಸೇವೆ ಮಾಡಿದ್ದಾರೆ. ಮಿಶ್ರ ಆರ್ಥಿಕತೆಗೆ ಹೆಚ್ಚು ಒತ್ತು ನೀಡಿ, ಬೃಹತ್ ಅಣೆಕಟ್ಟುಗಳ ನಿರ್ಮಾಣ, ಶಿಕ್ಷಣ, ಸಹಕಾರ ಕ್ಷೇತ್ರಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಲು ಕಾರಣರಾಗಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಪಂಚ ವಾರ್ಷಿಕ ಯೋಜನೆಗಳನ್ನು ರೂಪಿಸಿ ದೇಶದ ಪ್ರಗತಿಯನ್ನು ವೈಜ್ಞಾನಿಕವಾಗಿ ಸಾಧಿಸುವ ಪ್ರಯತ್ನ ಮಾಡಿದ್ದ ನೆಹರು ಅವರ ಹಾದಿಯಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದ್ದಾರೆ.

<><><>

ರಾಜ್ಯದಲ್ಲಿ ವರದಿಯಾಗಿದ್ದ ಶಂಕಿತ ಎಬೋಲಾ ಪ್ರಕರಣದ ಪ್ರಯೋಗಾಲಯ ತಪಾಸಣೆ ವರದಿ ಬಂದಿದ್ದು, ಸಂಪೂರ್ಣವಾಗಿ ನೆಗಟಿವ್ ಆಗಿದೆ. ಆ ವ್ಯಕ್ತಿಗೆ ಯಾವುದೇ ಸೋಂಕು ಇಲ್ಲ ಎಂದು ಆರೋಗ್ಯ ಇಲಾಖೆ ತಜ್ಞವೈದ್ಯರು ಖಚಿತಪಡಿಸಿದ್ದಾರೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಶಂಕೆ ವ್ಯಕ್ತವಾದ ತಕ್ಷಣವೇ ಇಲಾಖೆಯು ಸಾರ್ವಜನಕ ಆರೋಗ್ಯ ಮಾರ್ಗಸೂಚಿಗಳನ್ವಯ ಅತ್ಯಂತ ಕಟ್ಟುನಿಟ್ಟಾದ ಕ್ರಮ ಕೈಗೊಂಡಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

<><><>

ಹವಾಮಾನ ಬದಲಾವಣೆ, ನಗರೀಕರಣ, ಅಂತರ್ಜಲ ಕುಸಿತ ಹಾಗೂ ಮೂಲಸೌಕರ್ಯಗಳ ಮೇಲಿನ ಒತ್ತಡದಂತಹ ಭವಿಷ್ಯದ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಕೃತಕಬುದ್ಧಿಮತ್ತೆ, ಡಿಜಿಟಲ್ ತಂತ್ರಜ್ಞಾನಗಳು ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಸರ್ಕಾರದ ಮುಖ್ಯಕಾರ್ಯದರ್ಶಿ

ಡಾ.ಶಾಲಿನಿ ರಜನೀಶ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಜಲಮಂಡಳಿ ಆಯೋಜಿಸಿದ್ದ ರಾಷ್ಟ್ರೀಯ ಎಐ ಮತ್ತು ಡಿಜಿಟಲ್ ವಾಟರ್ ಶೃಂಗಸಭೆ ೨೦೨೬ ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರು, ಮಂಗಳೂರು, ಮೈಸೂರು, ಧಾರವಾಡ ನಗರಗಳಲ್ಲಿ ನೀರಿನ ಮೇಲಿನ ಒತ್ತಡ ಹೆಚ್ಚಾಗುತ್ತಿದೆ. ಇಂತಹ ಸಂದರ್ಭಗಳಲ್ಲಿ ತಂತ್ರಜ್ಞಾನ ಆಧಾರಿತ, ಆಡಳಿತ ವ್ಯವಸ್ಥೆಗಳು ಅತ್ಯಗತ್ಯವಾಗಿದೆ ಎಂದು ಪ್ರತಿಪಾದಿಸಿದ್ದಾರೆ. ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ.ರಾಮಪ್ರಸಾತ್ ಮನೋಹರ್ ಮಾತನಾಡಿ, ಬೆಂಗಳೂರಿನ ವಿಸ್ತಾರ ಮತ್ತು ಸಂಕೀರ್ಣತೆಯು ಸಾಂಪ್ರದಾಯಿಕ ನಿರ್ವಹಣಾ ಕಾರ್ಯಾಚರಣೆಗಳಿಂದ ಮುನ್ಸೂಚಕ ಮತ್ತು ಬುದ್ಧಿವಂತ ನಿರ್ವಹಣಾ ವ್ಯವಸ್ಥೆಗಳತ್ತ ಬದಲಾಗುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಜಲಮಂಡಳಿಯ ಎಐ ಚಾಲಿತ ಎನರ್ಜಿ, ಆಪ್ಟಿಮೈಜೇಷನ್ ಪಂಪ್‌ಗಳಿಂದ ವಾರ್ಷಿಕವಾಗಿ ಪೋಲಾಗುತ್ತಿದ್ದ ಸುಮಾರು ೪೨ ಕೋಟಿ ರೂಪಾಯಿ ಮೌಲ್ಯದ ವಿದ್ಯುತ್ ವೆಚ್ಚವನ್ನು ಉಳಿತಾಯ ಮಾಡಲು ನೆರವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಸರ್ಕಾರ ೧೨ ವರ್ಷಗಳನ್ನು ಪೂರೈಸಿದೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಆರ್ಥಿಕ ತಜ್ಞ ನವೀನ್ ಕುಮಾರ್, ಪ್ರಧಾನಿ ಮೋದಿಯವರು ಆಡಳಿತಕ್ಕೆ ಬಂದ ಬಳಿಕ, ಬ್ಯಾಂಕ್ ಖಾತೆಗಳನ್ನು ತೆರೆಯುವುದು ಸುಲಭವಾಗಿದೆ ಎಂದು ತಿಳಿಸಿದ್ದಾರೆ. ಡಿಜಿಟಲ್ ಬ್ಯಾಂಕ್‌ಗಳ ಮೂಲಕ ಖಾತೆ ತೆರೆಯುವುದು ಸುಲಭವಾಗಿದ್ದು, ಜನರು ವ್ಯವಹಾರಿಕವಾಗಿ ಹೆಚ್ಚು ಹೆಚ್ಚು ಭಾಗಿಯಾಗುತ್ತಿದ್ದಾರೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕೆಳಸ್ತರದ ಮಹಿಳೆಯರು ಇಂದು ಷೇರು ಮಾರುಕಟ್ಟೆಯಲ್ಲೂ ತೊಡಗಿಕೊಳ್ಳುವುದು ಅತ್ಯುತ್ತಮ ಬೆಳವಣಿಗೆ ಎಂದು ತಿಳಿಸಿದ್ದಾರೆ.

ಧ್ವನಿ : ನವೀನ್ ಕುಮಾರ್

<><><><>

ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ೩.೨೮ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೀಜ ಬಿತ್ತನೆ ಗುರಿ ಹೊಂದಲಾಗಿದ್ದು, ಜಿಲ್ಲೆಯ ಬೇಡಿಕೆಗೆ ತಕ್ಕಂತೆ ಗೊಬ್ಬರಗಳ ಪೂರೈಕೆ ಮಾಡಲಾಗುತ್ತಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಕೆ. ಮಲ್ಲಿಕಾರ್ಜುನ ಮಾಹಿತಿ ನೀಡಿದ್ದಾರೆ. ಹೀಗಾಗಿ ರೈತರು ಆತಂಕ ಪಡುವ ಅಗತ್ಯವಿಲ್ಲವೆಂದು ತಿಳಿಸಿದ್ದಾರೆ.  ಜಿಲ್ಲೆಯಲ್ಲಿ ಈವರೆಗೆ ೮೨ ಸಾವಿರ ೫೯೮ ಮೆಟ್ರಿಕ್ ಟನ್ ಗೊಬ್ಬರ ದಾಸ್ತಾನಿದ್ದು, ಇದರಲ್ಲಿ ೪೧ ಸಾವಿರದ ೫೧೭ ಮೆಟ್ರಿಕ್ ಟನ್ ಗೊಬ್ಬರ

ಈಗಾಗಲೇ ಮಾರಾಟವಾಗಿದೆ. ೪೧ ಸಾವಿರದ ೭೦ ಮೆಟ್ರಿಕ್ ಟನ್ ಗೊಬ್ಬರ ಮಾರಾಟವಾಗದೇ ಉಳಿದಿದೆ ಎಂದು ಹೇಳಿದ್ದಾರೆ. ಎಲ್ಲಿಯಾದರೂ ಅಕ್ರಮ ದಾಸ್ತಾನು ಕಂಡುಬಂದರೆ ಅಂತಹ ಮಾರಾಟಗಾರರ ಪರವಾನಗಿಯನ್ನು ಶಾಶ್ವತವಾಗಿ ರದ್ದುಪಡಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಘನ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಮನೆಗಳಲ್ಲಿ ಹಸಿ ಕಸ, ಒಣ ಕಸ ವಿಂಗಡಣೆ ಮಾಡಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ. ಸರ್ವೋಚ್ಚ ನ್ಯಾಯಾಲಯದ ೨೦೨೬ ರ ಹೊಸ ನಿಯಮಗಳ ಅನ್ವಯ ಹಸಿ ಕಸ, ಒಣ ಕಸ, ವಿಶೇಷ ತ್ಯಾಜ್ಯ, ಡೈಪರ್ ತ್ಯಾಜ್ಯ ವಾಗಿ ನಾಲ್ಕು ರೀತಿಯ ವಿಲೇವಾರಿ ಭಾಗಗಳಾಗಿ ರೂಪಿಸಲಾಗಿದ್ದು ಸಾರ್ವಜನಿಕರಲ್ಲಿ ೨೦೨೬ ರ ನಿಯಮಗಳ ಕುರಿತು ಅರಿವು ಮೂಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>